ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.

## ಸಿ.ಸಿ.ನಂ.1657/2023

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಎಂ ಡಿ ರಫೀ** | | |
| **ತಂದೆ:ಹೆಸರು** | **ಮಿರ್ಚಿ ಹುಸೇನ್ ಸಾಬ್** | **ಪಿಡಬ್ಲ್ಯೂ:** | **02** |
| **ವಯಸ್ಸು** | **42 ವರ್ಷ** | **ಸಿಡಬ್ಲ್ಯೂ:** | **03** |
| **ಉದ್ಯೋಗ:** | **ಮೆಕ್ಯಾನಿಕ್** | | |
| **ವಾಸ ಸ್ಥಳ:** | **ಸಿಂಧನೂರು.** | | |

**ದಿನಾಂಕ 03-06-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ ಸ ಅ ರವರಿಂದ**

ಈ ದಿನ ನ್ಯಾಯಾಲಯದಲ್ಲಿ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ಸಾಕ್ಷಿಗೆ ನಿಪಿ-1 ಸ್ಥಳ ಪಂಚನಾಮೆಯನ್ನು ತೋರಿಸಲಾಗಿ, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು **ನಿಪಿ-2 ರಿಂದ** 4 ಫೋಟೋಗಳಲ್ಲಿರುವ ತಮ್ಮ ಭಾವಚಿತ್ರಗಳನ್ನು ನೋಡಿ ಗುರುತಿಸಿರುತ್ತಾರೆ.

ನಾನು ಠಾಣೆಗೆ ಬೇರೆ ಕೆಲಸಕ್ಕೆಂದು ಹೋದಾಗ ಸಹಿ ಮಾಡಿದ್ದೆ. ನಿಪಿ-1 ಕ್ಕೆ ಸಹಿಯನ್ನು ಏತಕ್ಕಾಗಿ ಮಾಡಿದೆ ಎಂಬುದು ನನಗೆ ಗೊತ್ತಿಲ್ಲ. ನಿಪಿ-1 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ**

ದಿಃ 07-01-2023 ರಂದು ಸಂ.4-15 ರಿಂದ 5-15 ಗಂಟಯೆವರೆಗೆ ನಿಮ್ಮ & ಚಾಸಾ-2 ರವರ ಸಮಕ್ಷಮ ನಿಪಿ-1 ರಂತೆ ಸ್ಥಳ ಪಂಚನಾಮೆ ಮಾಡಿ, ನಿಪಿ-2 & 3 ನ್ನ ತೆಗೆದಿದ್ದರು ಎಂದರೆ ಸರಿಯಲ್ಲ.

ನಂತರ ಅದೇ ದಿನ ಸಂ.5-30 ರಿಂದ 6 ಗಂಟೆಯವರೆಗೆ ಪ್ರಕರಣದಲ್ಲಿ ಭಾಗಿಯಾದ ಕೆಎ 36/ಇಕ್ಯೂ 7686 & ಕೆ ಎ 36 ಇಎಫ್ 4888 ನ್ನು ನನ್ನ & ಚಾಸಾ-2 ರವರ ಸಮಕ್ಷಮ ಜಪ್ತು ಮಾಡಿ, ನಿಪಿ-4 ರಂತೆ ಫೋಟೋ ತೆಗೆದಿದ್ದರು ಎಂದರೆ ಸರಿಯಲ್ಲ.

ನಿಪಿ-1 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಸಿಂಧನೂರು.**